ನಡೆಯುತ್ತಿತ್ತು. ೩ ಕೋಟಿ ರೂಪಾಯಿ ಸಾಕಾಗಲಿಲ್ಲವೆಂದು ಆ ವ್ಯಾಪಾರ ಕುದುರಲಿಲ್ಲವೆಂದು ಈಗ ೫ ಕೋಟಿ ರೂಪಾಯಿ ಆಗಿದೆ, ಆದ್ದರಿಂದ ವ್ಯಾಪಾರ ಕುದುರಿದೆಯೆಂದು ಜನ ಬೀದಿಯಲ್ಲಿ ಮಾತನಾಡಿಕೊಳ್ಳುತ್ತಿದ್ದಾರೆ. ಅದನ್ನು ಹೋಗಲಾಡಿಸುವುದಕ್ಕೆ ವಿಚಾರ ಮಾಡಬೇಕಾಗುತ್ತದೆ. ಸರ್ಕಾರದ ಮೇಲೆ ಬರತಕ್ಕ ಆಪಾದನೆಯನ್ನು ದೂರ ಮಾಡುವುದಕ್ಕೆ ಅದರಿಂದ ತಪ್ಪಿಸಿಕೊಳ್ಳುವುದ ಕ್ಕೋಸ್ಕರ ಸದನದ ಸಮಿತಿಯನ್ನು ರಚನೆ ಮಾಡಬೇಕೆಂದು ನಾನು ಮತ್ತೊಮ್ಮೆ ವಿನಂತಿ ಮಾಡಿಕೊಳ್ಳುತ್ತೇನೆ. ತಾವು ಸದನದ ಸಮಿತಿ ಮಾಡದಿದ್ದರೆ ನಾನೂ ಕೂಡ ಇದರಲ್ಲಿ ಸರ್ಕಾರ ಭಾಗಿಯಾಗಿದೆಯೆಂದು ಹೇಳಬೇಕಾಗುತ್ತದೆ. ಜನರು ಬೀದಿಯಲ್ಲಿ ಏನು ಮಾತನಾಡಿಕೊಳ್ಳುತ್ತಿದ್ದಾರೆ ಅದು ನಿಜವೆನ್ನುವ ಭಾವನೆಗೆ ನಾವು ಬರಬೇಕಾಗಿದೆ. ಆ ದೃಷ್ಟಿಯಿಂದ ನಾನು ಕೂಡ ಈ ಸಭೆಯಿಂದ ಹೊರಗಡೆ ಹೋಗುತ್ತಿದ್ದೇನೆ.

(ಈ ಹಂತದಲ್ಲಿ ಮಾನ್ಯ ಸದಸ್ಯರಾದ ಸಿ. ಬೈರೇಗೌಡರು ಸಹ ಸಭಾತ್ಯಾಗ ಮಾಡಿದರು)

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ :

"ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೧ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬೇಡಿಕೆ ಸಂಖ್ಯೆ ೭,೬೦ ಮತ್ತು ೬೧ ಇವುಗಳಿಗೆ ಸಂಬಂಧಿಸಿದಂತೆ ಸಂದಾಯ ವಾಗುವ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ಮಂಜೂರಾದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗನ್ನು ಮಂಜೂರು ಮಾಡುವುದು"

ಪ್ರಸ್ತಾವನೆ ಅಂಗೀಕೃತವಾಯಿತು ಮತ್ತು ಬೇಡಿಕೆಗಳಿಗೆ ಅನುಮೋದನೆ ದೊರೆಯಿತು.

(ಸಭಾಧ್ಯಕ್ಷರ ಆದೇಶದ ಮೇರೆಗೆ ಮಂಜೂರಾದ ಬೇಡಿಕೆಗಳನ್ನು ಈ ಕೆಳಗೆ ನಮೂದಿಸಲಾಗಿದೆ).

ಅಭಿಯಾಚನೆ ಕ್ರಮಾಂಕ ೭—ಗಣಿಗಳು ಮತ್ತು ಭೂ ವಿಜ್ಞಾನ

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ, ಗಣಿ ಮತ್ತು ಭೂ ವಿಜ್ಞಾನ ಮಂತ್ರಿಗಳು).—ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೧ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಗಣಿಗಳು ಮತ್ತು ಭೂ ವಿಜ್ಞಾನಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೬,೪೨,೬೬,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡಲಾಗಿದೆ.

ಅಭಿಯಾಚನೆ ಕ್ರಮಾಂಕ ೬೦—ಹರಿಜನ ಗಿರಿಜನ ಮತ್ತು ಹಿಂದುಳಿದ ವರ್ಗದವರ ಕಲ್ಯಾಣ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೧ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಹರಿಜನ ಗಿರಿಜನ ಮತ್ತು ಹಿಂದುಳಿದ ವರ್ಗದವರ ಕಲ್ಯಾಣಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೧೨,೮೮,೦೦,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೧,೫೯,೫೫,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ ೬೧-ಮಹಿಳೆ ಮತ್ತು ಮಕ್ಕಳ ಕಲ್ಯಾಣ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೧ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೨೭,೫೦,೫೮,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೭೦,೦೦,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.